ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE: 24/1/2020

# ಹ್ಯಾರಿಸ್ ಹುಟ್ಟುಹಬ್ಬದ ವೇಳೆ ಸಿಡಿದಿದ್ದು ಬಾಂಬಲ್ಲ, ಪಟಾಕಿ!

ಕ.ಪ್ರ. 24-1-2020

## ಹಾರಿದ್ದ ರಾಕೆಟ್ ಆಗಸದಲ್ಲಿ ಸಿಡಿಯದೆ ವೇದಿಕೆ ಮೇಲೆ ಬಿದ್ದು ಅವಘಡ ಬೆಂಬಲಿಗರು ಸಿಡಿಸಿದ್ದ ಪಟಾಕಿ | ಪೊಲೀಸರ ತನಿಖೆಯಿಂದ ಖಚಿತ

• ಕನ್ನಡಪ್ರಭ ವಾರ್ತೆ ಬೆಂಗಳೂರು

ಶಾಂತಿನಗರದ ಕಾಂಗ್ರೆಸ್ ಶಾಸಕ ಎನ್.ಎ.ಹ್ಯಾರಿಸ್ ಅವರು ಪಾಲ್ಗೊಂಡಿದ್ದ ಹುಟ್ಟುಹಬ್ಬ ಆಚರಣೆ ಕಾರ್ಯಕ್ರಮದಲ್ಲಿ ಸ್ಫೋಟಗೊಂಡಿದ್ದು ಪಟಾಕಿ ಎಂಬುದು ಪೊಲೀಸರ ತನಿಖೆಯಿಂದ ಖಚಿತವಾಗಿದೆ.

ಸ್ಥಳೀಯ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಹುಟ್ಟುಹಬ್ಬ ಆಚರಣೆ ನಿಮಿತ್ತ ರಸಮಂಜರಿ ಕಾರ್ಯಕ್ರಮ ಆಯೋಜಿಸಿದ್ದರು. ರಾತ್ರಿ 8.30ರ ಸುಮಾರಿಗೆ ವೇದಿಕೆಗೆ ಬಂದ ಶಾಸಕರನ್ನು ಸ್ವಾಗತಿಸಲು ಬೆಂಬಲಿಗರು ಪಟಾಕಿ ಸಿಡಿಸಿದ್ದಾರೆ. ಆಗ ರಾಕೆಟ್ ಮಾದರಿ ಪಟಾಕಿಯೊಂದು ಆಕಾಶದಲ್ಲಿ ಸ್ಫೋಟಗೊಳ್ಳದೆ ವೇದಿಕೆ ಮೇಲೆ ಬಿದ್ದು ಸಿಡಿದಿದೆ. ಇದರಿಂದ ಶಾಸಕರು ಸೇರಿದಂತೆ ವೇದಿಕೆಯಲ್ಲಿದ್ದ ನಾಲ್ವರಿಗೆ ಸಣ್ಣ ಪ್ರಮಾಣದ ಸುಟ್ಟ ಗಾಯಗಳಾಗಿವೆ ಎಂದು ಹಿರಿಯ



■ ಬುಧವಾರ ರಾತ್ರಿ ಹ್ಯಾರಿಸ್ ಹುಟ್ಟುಹಬ್ಬದ ಪ್ರಯುಕ್ತ ರಸ ಮಂಜರಿ

■ ಶಾಸಕರ ಸ್ವಾಗತಿಸಲು ಪಟಾಕಿ ಸಿಡಿಸಿದ್ದ ಬೆಂಬಲಿಗರು

ಅಧಿಕಾರಿಗಳು 'ಕನ್ನಡಪ್ರಭ'ಕ್ಕೆ ಸ್ಪಷ್ಟಪಡಿಸಿದ್ದಾರೆ.

ಘಟನಾ ಸ್ಥಳದಲ್ಲಿ ಸಿಡಿ ಮದ್ದಿಗೆ ಬಳಸುವ ರಾಸಾಯನಿಕ ವಸ್ತುಗಳು ಹಾಗೂ ಸಿಲ್ವರ್ ಬಣ್ಣದ ಗುಂಡುಗಳು ಸಿಕ್ಕಿವೆ. ಸ್ಫೋಟದ ತೀವ್ರತೆ ಹೆಚ್ಚಿಸಲು ಸಣ್ಣ ಸಣ್ಣ ಗುಂಡುಗಳನ್ನು ಬಳಸುತ್ತಾರೆ. ಆಕಸ್ಮಿಕವಾಗಿ ನಡೆದಿರುವ ಘಟನೆ ಇದಾಗಿದ್ದು, ಉದ್ದೇಶಪೂರ್ವಕ ಕೃತ್ಯವಲ್ಲ ಎಂದು ಪೊಲೀಸರು ಹೇಳಿದ್ದಾರೆ.

ಈ ಸಂಬಂಧ ಕಾರ್ಯಕ್ರಮ ಆಯೋಜಕರು ಹಾಗೂ ಸ್ಥಳೀಯರನ್ನು ವಿಚಾರಣೆ ನಡೆಸಿ ಹೇಳಿಕೆ ಪಡೆಯಲಾಗಿದೆ. ಭಯಪಡುವ ಅನಾಹುತ ನಡೆದಿಲ್ಲ. ಕಚ್ಚಾ ಬಾಂಬ್ ಬಳಕೆ ನಂಬುವುದು ಕೂಡ ಕಷ್ಟ. ಅದರಲ್ಲಿ ಯಾವುದೇ ಹುರುಳಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ವಿವೇಕನಗರ ಸಮೀಪದ ವನ್ನಾರ್‌ಪೇಟೆಯಲ್ಲಿ ಗುರುವಾರ ರಾತ್ರಿ ತಮ್ಮ ಹುಟ್ಟುಹಬ್ಬ ನಿಮಿತ್ತ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ನಿಗೂಢವಾಗಿ ವಸ್ತುವೊಂದು ಸ್ಫೋಟಗೊಂಡು ಶಾಸಕ ಹ್ಯಾರಿಸ್ ಹಾಗೂ ಅವರ ಮೂವರು ಬೆಂಬಲಿಗರು ಗಾಯಗೊಂಡಿದ್ದರು. ಇದೊಂದು ಪೂರ್ವನಿಯೋಜಿತ ಕೃತ್ಯ. ಸ್ಫೋಟಗೊಂಡಿದ್ದು ಕಚ್ಚಾ ಬಾಂಬ್ ಆಗಿರಬಹುದು ಎಂದು ಹ್ಯಾರಿಸ್ ಪುತ್ರ ಮೊಹಮ್ಮದ್ ನಲಪಾಡ್ ಆರೋಪಿಸಿದ್ದರು.